# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1714**

ಸದಸ್ಯರ ಹೆಸರು : ಶ್ರೀ ಬಸನಗೌಡ ಬಾದರ್ಲಿ
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 23-03-2026

ಉತ್ತರಿಸುವ ಸಚಿವರು ಮಾನ್ಯ ಇಂಧನ ಸಚಿವರು

****

| | ಪ್ರಶ್ನೆ | ಉತ್ತರ |
|---|---|---|
| ಅ) | ಸಿಂಧನೂರಿನಲ್ಲಿ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕಕ್ಕಾಗಿ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; | ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯ ಸಿಂಧನೂರು ತಾಲ್ಲೂಕಿನಲ್ಲಿ ಕೃಷಿ ಪಂಪ್‌ಸೆಟ್‌ಗಳ ವಿದ್ಯುತ್ ಸಂಪರ್ಕಕ್ಕಾಗಿ ಒಟ್ಟು 35 ಅರ್ಜಿಗಳು ಬಾಕಿ ಇರುತ್ತವೆ. |
| ಆ) | ಉಚಿತ ವಿದ್ಯುತ್ ಯೋಜನೆಯಡಿ ಲಾಭ ಪಡೆಯುತ್ತಿರುವ ರೈತರ ಸಂಖ್ಯೆ ಎಷ್ಟು; | ಸಿಂಧನೂರು ತಾಲ್ಲೂಕಿನಲ್ಲಿ ಒಟ್ಟು 9,256 (10ಹೆಚ್.ಪಿ ವರೆಗಿನ ನೀರಾವರಿ ಪಂಪ್‌ಸೆಟ್ ಗಳು) ರೈತರು ಉಚಿತ ವಿದ್ಯುತ್ ಯೋಜನೆಯಡಿಯಲ್ಲಿ ಲಾಭ ಪಡೆಯುತ್ತಿದ್ದಾರೆ. |
| ಇ) | ಪಂಪ್‌ಸೆಟ್‌ಗಳಿಗೆ ಪ್ರತ್ಯೇಕ ಫೀಡರ್ ವ್ಯವಸ್ಥೆ ಜಾರಿಯಲ್ಲಿದೆಯೇ: | ಸಿಂಧನೂರು ತಾಲ್ಲೂಕಿನಲ್ಲಿ ಬರುವ ಕೃಷಿ ಪಂಪ್ ಸೆಟ್ ಗಳಿಗೆ ಪ್ರತ್ಯೇಕ ಫೀಡರ್ ವ್ಯವಸ್ಥೆ ಜಾರಿಯಲ್ಲಿರುತ್ತದೆ.<br><br>ಸಿಂಧನೂರು ತಾಲ್ಲೂಕಿನಲ್ಲಿ ಒಟ್ಟು 38 ಪ್ರತ್ಯೇಕ ಕೃಷಿ ಫೀಡರ್ ಗಳು ಇರುತ್ತವೆ ಹಾಗೂ ಪ್ರತಿದಿನ ಹಗಲು ವೇಳೆ 07 ತಾಸು 3 ಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. |
| ಈ) | 2024-25ರಲ್ಲಿ ಟ್ರಾನ್ಸ್‌ಫಾರ್ಮರ್ ದೋಷದಿಂದ ಕೃಷಿ ಹಾನಿಯಾದ ಸಂದರ್ಭದಲ್ಲಿ ಪರಿಹಾರ ನೀಡಿರುವ ಪ್ರಕರಣಗಳ ಸಂಖ್ಯೆ ಎಷ್ಟು.? | ಸಿಂಧನೂರು ತಾಲ್ಲೂಕಿನಲ್ಲಿ 2024-25 ರಲ್ಲಿ ಟ್ರಾನ್ಸ್ ಫಾರ್ಮರ್ ದೋಷ ದಿಂದ ಯಾವುದೇ ರೀತಿಯ ಕೃಷಿ ಗೆ ಹಾನಿಯಾಗಿರುವ ಪ್ರಕರಣಗಳು ಇರುವುದಿಲ್ಲ.<br><br>2024-25ರಲ್ಲಿ ಒಟ್ಟು 118 ಸಂಖ್ಯೆಯ ಕೃಷಿ ಪರಿವರ್ತಕಗಳು ವಿಫಲಗೊಂಡಿದ್ದು, 118 ಪರಿವರ್ತಕ ಗಳನ್ನು ಕೆ.ಇ.ಆರ್.ಸಿ. ನಿಯಮಾವಳಿಗಳ ಪ್ರಕಾರ 72 ಗಂಟೆಗಳೊಳಗೆ ಬದಲಾಯಿಸಲಾಗಿರುತ್ತದೆ. |

ಸಂಖ್ಯೆ: ಎನರ್ಜಿ 89 ಇಬಿಎಸ್ 2026

(ಕೆ.ಜೆ.ಜಾರ್ಜ್)
ಇಂಧನ ಸಚಿವರು